(25)

# ಕರ್ನಾಟಕ ವಿಧಾನ ಪರಿಷತ್ತು

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಗೋವಿಂದರಾಜು, ಇವರು ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆ ಬಗ್ಗೆ

---

**ವಿಷಯ**:

ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಕಳಪೆ ಗುಣಮಟ್ಟದ ಕಂಪ್ಯೂಟರ್, ಜೆರಾಕ್ಸ್ ಯಂತ್ರ, ಸಿಸಿಟಿವಿ ಕ್ಯಾಮೆರಾಗಳೂ ಸೇರಿದಂತೆ ಇತರೆ ಎಲೆಕ್ಟ್ರಾನಿಕ್ ಉಪಕರಣಗಳು ಪೂರೈಕೆಯಾಗಿರುವುದು ತನಿಖೆಯಿಂದ ದೃಢಪಟ್ಟಿದ್ದು, ಕೋಟ್ಯಂತರ ರೂ. ಅಕ್ರಮ ನಡೆದಿರುವ ಆರೋಪಗಳು ಕೇಳಿ ಬಂದಿದೆ. ಬೆಂಗಳೂರು ನಗರದ ಪೂರ್ವ, ಪಶ್ಚಿಮ, ದಕ್ಷಿಣ, ಉತ್ತರ ಮತ್ತು ಕೇಂದ್ರ ವಲಯದ ಗ್ರಂಥಾಲಯಗಳ ಅಧಿಕಾರಿ, ಸಿಬ್ಬಂದಿ 2009-10 ರಿಂದ 2018-20 ರವರೆಗೆ ಕೆಟಿಪಿಪಿ ನಿಯಮಗಳನ್ನು ಉಲ್ಲಂಘಿಸಿ ಬ್ಲಾಕ್ ಲಿಸ್ಟ್ ಸೇರಬೇಕಾದ ಸಂಸ್ಥೆಯಿಂದ ಎಲೆಕ್ಟ್ರಾನಿಕ್ ಸಾಮಗ್ರಿಗಳನ್ನು ಖರೀದಿಸಿದ್ದಾರೆ 2009 ರಿಂದ 2019ರ ನಡುವಿನ ವ್ಯವಹಾರ 2021 ರಲ್ಲಿ ಬೆಳಕಿಗೆ ಬಂದರೂ ಇದುವರೆಗೂ ಕ್ರಮವಿಲ್ಲ, ಈ ವಿಷಯ ಸಾರ್ವಜನಿಕ ಮಹತ್ವದಾಗಿರುವುದರಿಂದ ಮಾನ್ಯ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಕಳಪೆ ಸಾಮಗ್ರಿಗಳನ್ನು ಸರಬರಾಜು ಮಾಡಿ ಅಕ್ರಮವೆಸಗಿರುವ ಮೆ:ಅಕ್ಷಾ ಟೆಕ್ನಾಲಜಿ ಸಂಸ್ಥೆಯ ವಿರುದ್ಧ ಕ್ರಮ ಕೈಗೊಳ್ಳುವ ಪ್ರಕರಣಕ್ಕೆ ಸಂಬಂಧಿಸಿದಂತೆ, ರಾಜ್ಯ ಯೋಜನಾ ನಿರ್ದೇಶಕರು, ಕರ್ನಾಟಕ ಸಮಗ್ರ ಶಿಕ್ಷಣ, ಬೆಂಗಳೂರು ಇವರಿಂದ ಪ್ರಾಥಮಿಕ ತನಿಖೆ ನಡೆಸಿ ವಿಸ್ತೃತವಾದ ವರದಿ ಪಡೆಯಲಾಗಿರುತ್ತದೆ.

ಸದರಿ ವರದಿಯನ್ನು ಕೂಲಕಂಷವಾಗಿ ಪರಿಶೀಲಿಸಲಾಗಿ, ಎಲ್ಲಾ ಎಲೆಕ್ಟ್ರಾನಿಕ್ಸ್ ಸಾಮಗ್ರಿಗಳ, ಯಂತ್ರಗಳ, ಪರಿಕರಗಳ ಖರೀದಿಯ ಸಮಯದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯು ಮೆ|| ಅಕ್ಷಾ ಟೆಕ್ನಾಲಜಿಸ್ ಸಂಸ್ಥೆಗೆ ಅನುಕೂಲಕರವಾಗಿ ವರ್ತಿಸಿರುವುದು ಕಂಡುಬಂದಿರುತ್ತದೆ.

ಸದರಿ ತನಿಖಾ ವರದಿಯನ್ವಯ ರಾಜ್ಯ ಕೇಂದ್ರ ಗ್ರಂಥಾಲಯ, ಬೆಂಗಳೂರು, ರಾಜ್ಯ ಕೇಂದ್ರ ಗ್ರಂಥಾಲಯ, ಉತ್ತರ ವಲಯ, ಕೇಂದ್ರ ವಲಯ, ದಕ್ಷಿಣ ವಲಯ, ಪೂರ್ವ ವಲಯ, ಪಶ್ಚಿಮ ವಲಯ ಗ್ರಂಥಾಲಯಗಳಲ್ಲಿ ಎಲೆಕ್ಟ್ರಾನಿಕ್ಸ್ ಉಪಕರಣಗಳ ಖರೀದಿಯಲ್ಲಿ ಕರ್ತವ್ಯ ಲೋಪವೆಸಗಿರುವುದು ಕಂಡುಬಂದ ಹಿನ್ನೆಲೆಯಲ್ಲಿ, ಕರ್ತವ್ಯಲೋಪವೆಸವೆಗಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಪಟ್ಟಿಯನ್ನು ತಯಾರಿಸಿ, ದೋಷಾರೋಪಣಾ ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ತಿಳಿಸಲಾಗಿತ್ತು.

..2

ಅದರಂತೆ, ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಇವರು ಬೆಂಗಳೂರು ನಗರದ ಪೂರ್ವ, ಪಶ್ಚಿಮ, ದಕ್ಷಿಣ, ಉತ್ತರ ಮತ್ತು ಕೇಂದ್ರ ವಲಯದ ಗ್ರಂಥಾಲಯಗಳ 07 ಅಧಿಕಾರಿಗಳ ವಿರುದ್ಧ ದೋಷಾರೋಪಣಾ ಪಟ್ಟಿಗಳನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿದ್ದು, ನಿಯಮ ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಜಾರಿಗೊಳಿಸಲು ಕ್ರಮವಹಿಸಲಾಗುತ್ತಿದೆ.

ಮುಂದುವರೆದು, ಬೆಂಗಳೂರು ನಗರವಲ್ಲದೇ ರಾಜ್ಯದ ಇತರೆ ಜಿಲ್ಲಾ/ನಗರ ಕೇಂದ್ರ ಗ್ರಂಥಾಲಯಗಳಲ್ಲಿ ಸಾಮಾಗ್ರಿಗಳನ್ನು ಮೆ: ಅಕ್ಕಾ ಟೆಕ್ನಾಲಜಿಸ್‌ನಿಂದ ಖರೀದಿಸಲಾಗಿರುವುದರಿಂದ, ಖರೀದಿಯ ಸಂಪೂರ್ಣ ಪ್ರಕ್ರಿಯೆಯನ್ನು ತನಿಖೆಗೆ ಒಳಪಡಿಸಲು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಇಪಿ/ 30 /ಎಲ್‌ಐಬಿ /2025**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು